# ಕಬಡ್ಡಿ ವ್ಯಾಪಕ, ಪ್ರಸಿದ್ಧ ಕ್ರೀಡೆ: ಸುನಿಲ್‌ಕುಮಾರ್

## ಪೆರ್ವಾಜೆಯಲ್ಲಿ ಮಂಗಳೂರು ವಿ.ವಿ.ಮಟ್ಟದ ಅಂತರ್ ಕಾಲೇಜು ಮಹಿಳಾ ಕಬಡ್ಡಿ ಚಾಂಪಿಯನ್‌ಶಿಪ್ ಉದ್ಘಾಟನೆ

• **ಕನ್ನಡಪ್ರಭ ವಾರ್ತೆ** ಕಾರ್ಕಳ

ಖ್ಯಾತ ಕಬಡ್ಡಿ ಆಟಗಾರರನ್ನು ರಾಜ್ಯಕ್ಕೆ, ರಾಷ್ಟ್ರಕ್ಕೆ ನೀಡಿದ ಕೀರ್ತಿ ಕಾರ್ಕಳಕ್ಕಿದೆ. ಏಷ್ಯನ್ ಗೇಮ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ಮಹಿಳಾ ಕಬಡ್ಡಿ ತಂಡದ ಕ್ಯಾಪ್ಟನ್ ಮಮತಾ ಪೂಜಾರಿ, ಕ್ರೀಡಾಳು ಸುಕೇಶ್ ಹೆಗ್ಡೆ ಕಾರ್ಕಳದವರು ಎನ್ನುವುದು ಹೆಮ್ಮೆಯ ವಿಚಾರ. ಇತ್ತೀಚಿನ ವರ್ಷಗಳಲ್ಲಿ ಕಬಡ್ಡಿ ತನ್ನದೇ ಆದ ವ್ಯಾಪಕತೆ ಹಾಗೂ ಪ್ರಸಿದ್ಧಿ ಪಡೆಯುತ್ತಿದೆ. ತಾಲೂಕಿನಲ್ಲಿ ಮೊದಲ ಬಾರಿಗೆ ವಿ.ವಿ. ಮಟ್ಟದ ಕ್ರೀಡೆ ನಡೆಯುತ್ತಿರುವುದು ಸಂತಸದ ವಿಷಯ ಎಂದು ಕಾರ್ಕಳ ಶಾಸಕ ವಿ.ಸುನಿಲ್ ಕುಮಾರ್ ಹೇಳಿದ್ದಾರೆ.

ಇಲ್ಲಿನ ಮಂಜುನಾಥ ಪೈ ಸ್ಮಾರಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಮಂಗಳೂರು ವಿ.ವಿ. ಜಂಟಿಯಾಗಿ ಆಯೋಜಿಸಿದ್ದ ಪ್ರಸಕ್ತ ಶೈಕ್ಷಣಿಕ ವರ್ಷದ ಅಂತರ್‌ಕಾಲೇಜು ಮಹಿಳಾ ಕಬಡ್ಡಿ ಚಾಂಪಿಯನ್‌ಶಿಪ್ ಪಂದ್ಯಾವಳಿಯ ಉದ್ಘಾಟನೆಯನ್ನು ಪೆರ್ವಾಜೆಯ ನಾರಾಯಣಗುರು ಸಭಾಭವನದಲ್ಲಿ ಸೋಮವಾರ ನೆರವೇರಿಸಿ ಅವರು ಮಾತನಾಡಿದರು.

ಅಂತರಾಷ್ಟ್ರೀಯ ಕ್ರೀಡಾಪಟು, ಚಿತ್ರನಟ ರೋಹಿತ್ ಕುಮಾರ್ ಕಟೀಲು ಮಾತನಾಡಿ, ಕಬಡ್ಡಿ ಪಟುಗಳು ವಿಶ್ವವಿದ್ಯಾನಿಲಯ ಮಟ್ಟಕ್ಕಷ್ಟೇ ಸೀಮಿತಗೊಳ್ಳದೆ, ಕೇಂದ್ರ ಹಾಗೂ ರಾಜ್ಯ ಸರ್ಕಾರ ನೀಡುವ ಸವಲತ್ತು ಬಳಸಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಿಂಚಬೇಕು ಎಂದರು.

10-15 ವರ್ಷಗಳ ಹಿಂದೆ ಕಬಡ್ಡಿಗೆ ಪ್ರೋತ್ಸಾಹ ನೀಡುವವರಿರಲಿಲ್ಲ. ಕ್ರೀಡಾಳುಗಳ ಹೆತ್ತವರೂ ಪ್ರೋತ್ಸಾಹ ಕೊಡುತ್ತಿರಲಿಲ್ಲ. ಇತ್ತೀಚೆಗೆ ಬಾಲಿವುಡ್‌ನ ಸಿನಿಮಾ ನಟರು ಕಬಡ್ಡಿಗೆ ಪ್ರಾಯೋಜಕತ್ವ ನೀಡಿದ್ದರ ಪರಿಣಾಮ ಕಬಡ್ಡಿ ವಿಶ್ವದಾದ್ಯಂತ ಜನಪ್ರಿಯತೆ ಪಡೆಯುತ್ತಿರುವುದು ಹೆಮ್ಮೆಯ ವಿಷಯ ಎಂದರು.



ಕಾರ್ಕಳದಲ್ಲಿ ಅಂತರ್‌ಕಾಲೇಜು ಮಹಿಳಾ ಕಬಡ್ಡಿ ಚಾಂಪಿಯನ್‌ಶಿಪ್ ಪಂದ್ಯಾವಳಿಯನ್ನು ಶಾಸಕ ವಿ. ಸುನಿಲ್ ಕುಮಾರ್ ಉದ್ಘಾಟಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಶ್ರೀವರ್ಮ ಅಜ್ರಿ ಮಾತನಾಡಿ, ವಿ.ವಿ. ಮಟ್ಟದ ಪಂದ್ಯಾವಳಿ ಆಯೋಜಿಸುವ ಅವಕಾಶ ನಮ್ಮ ಸರ್ಕಾರಿ ಕಾಲೇಜಿಗೆ ಲಭಿಸಿದ್ದು ಹೆಮ್ಮೆಯ ವಿಷಯ ಎಂದರು.

ಕಟೀಲು ಇಂಟರ್‌ನ್ಯಾಶನಲ್ ಹೋಟೇಲ್‌ನ ಆಡಳಿತ ಪಾಲುದಾರ ಡಿ. ಆರ್. ರಾಜು ಮಾತನಾಡಿ, ವ್ಯಕ್ತಿಯ ಮಾನಸಿಕ ಹಾಗೂ ದೈಹಿಕ ಸದೃಢತೆಗೆ ಕ್ರೀಡೆ ಅವಶ್ಯ. ಸೋಲು ಗೆಲುವುಗಳನ್ನು ಸಂತೋಷದಿಂದ ಸ್ವೀಕರಿಸಿ ಎಂದರು.

> **10-15 ವರ್ಷಗಳ ಹಿಂದೆ ಕಬಡ್ಡಿಗೆ ಪ್ರೋತ್ಸಾಹ ನೀಡುವವರಿರಲಿಲ್ಲ. ಕ್ರೀಡಾಳುಗಳ ಹೆತ್ತವರೂ ಪ್ರೋತ್ಸಾಹ ಕೊಡುತ್ತಿರಲಿಲ್ಲ. ಇತ್ತೀಚೆಗೆ ಬಾಲಿವುಡ್‌ನ ಸಿನಿಮಾ ನಟರು ಕಬಡ್ಡಿಗೆ ಪ್ರಾಯೋಜಕತ್ವ ನೀಡಿದ್ದರ ಪರಿಣಾಮ ಕಬಡ್ಡಿ ವಿಶ್ವದಾದ್ಯಂತ ಜನಪ್ರಿಯತೆ ಪಡೆಯುತ್ತಿರುವುದು ಹೆಮ್ಮೆಯ ವಿಷಯ.**
>
> • **ರೋಹಿತ್ ಕುಮಾರ್**, ಅಂ.ರಾ.ಕಬಡ್ಡಿ ಪಟು.

ಮಂಗಳೂರು ವಿ.ವಿ. ದೈಹಿಕ ಶಿಕ್ಷಣ ವಿಭಾಗದ ಹರಿದಾಸ್ ಕೂಳೂರು ಹಾಗೂ ಕಾಲೇಜಿನ ಕ್ರೀಡಾ ಕಾರ್ಯದರ್ಶಿ ವಿಘ್ನೇಶ್ ಇದ್ದರು. ಎರಡು ದಿನಗಳ ಕಾಲ ನಡೆಯುವ ಈ ಪಂದ್ಯಾವಳಿಯಲ್ಲಿ ಸುಮಾರು 30 ತಂಡಗಳು ಭಾಗವಹಿಸಿದ್ದು, ಕಾರ್ಕಳದಲ್ಲಿ ಜರಗಿದ ಮೊದಲ ವಿ.ವಿ. ಮಟ್ಟದ ಮಹಿಳಾ ಕಬಡ್ಡಿ ಪಂದ್ಯಾವಳಿ ಇದಾಗಿದೆ.

ವಾಣಿಜ್ಯ ವಿಭಾಗದ ಮುಖ್ಯಸ್ಥೆ ಜ್ಯೋತಿ ಎಲ್. ಜನ್ನೆ ನಿರೂಪಿಸಿದರು. ಸ್ನಾತಕೋತ್ತರ ವಿಭಾಗದ ಸಂಚಾಲಕ ವಿದ್ಯಾಧರ ಹೆಗ್ಡೆ ವಂದಿಸಿದರು.

ನಂತರ ಕ್ರೀಡಾಳುಗಳೊಂದಿಗೆ ಅಂಗಣದಲ್ಲಿ ಕಬಡ್ಡಿ ಆಡುವ ಮೂಲಕ ರೋಹಿತ್ ಕುಮಾರ್ ಕಟೀಲು ಪಂದ್ಯಾವಳಿಗೆ ಸಾಂಕೇತಿಕ ಚಾಲನೆ ನೀಡಿದರು.